# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ 166 ರಲ್ಲಿ ಘೋಷಿಸಿರುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಸತಿ ನಿಲಯಗಳು ಮತ್ತು ವಸತಿ ಶಾಲೆಗಳ ವಿದ್ಯಾರ್ಥಿಗಳ ಭೋಜನ ವೆಚ್ಚವನ್ನು ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.100/-ಗಳಷ್ಟು ಹೆಚ್ಚಿಸಲು ಸರ್ಕಾರದ ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:**

1. 2024-25ನೇ ಸಾಲಿನ ಜುಲೈ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ-166
2. ಆರ್ಥಿಕ ಇಲಾಖೆಯ ಆಯವ್ಯಯ ಸಲಹಾ ಟಿಪ್ಪಣಿ ಸಂಖ್ಯೆ: ಆಇ 175 ವೆಚ್ಚ-3/2024 ದಿನಾಂಕ23/04/2024
3. ಸರ್ಕಾರದ ಆದೇಶ ಸಂಖ್ಯೆ:MWD 124 MDS 2022 ದಿ:11/04/2022
4. ಅಲ್ಪಸಂಖ್ಯಾತರ ನಿರ್ದೇಶನಾಲಯದ ಇ-ಕಚೇರಿ ಕಡತ ಸಂಖ್ಯೆ: DOM/DEVP/MDRS/11/2024

** ** **

**ಪ್ರಸ್ತಾವನೆ:**

ಮೇಲೆ ಓದಲಾದ (1)ರ 2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ (166)ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿರುತ್ತದೆ.

***"ಸಮಾಜ ಕಲ್ಯಾಣ, ಪರಿಶಿಷ್ಟ ಪಂಗಡಗಳ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಸತಿ ನಿಲಯಗಳು, ಆಶ್ರಮ ಶಾಲೆಗಳು ಮತ್ತು ವಸತಿ ಶಾಲೆಗಳ ವಿದ್ಯಾರ್ಥಿಗಳ ಭೋಜನ ವೆಚ್ಚವನ್ನು ಪ್ರತಿ ವಿದ್ಯಾರ್ಥಿಗೆ ಪ್ರತಿ ಮಾಹೆಗೆ 100ರೂ.ನಂತೆ ಹೆಚ್ಚಿಸಲಾಗುವುದು"***

ಮೇಲಿನ ಆಯವ್ಯಯ ಘೋಷಣೆಯು ಮುಂದುವರೆದ ಮಾರ್ಪಾಡಿತ ಯೋಜನೆಯಾಗಿದ್ದು, ಸದರಿ ಕಾರ್ಯಕ್ರಮವನ್ನು ಪ್ರಸಕ್ತ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ:2225-04-277-0-10 ಅಲ್ಪಸಂಖ್ಯಾತರ ವಸತಿ ಶಾಲೆಗಳು ರಡಿ ಒದಗಿಸಲಾದ ಅನುದಾನದ ಮಿತಿಯಲ್ಲಿಯೇ ವಿದ್ಯಾರ್ಥಿಗಳ ಮಂಜೂರಾತಿ ಸಂಖ್ಯೆಗೆ ಅನುಗುಣವಾಗಿ ಅನುಷ್ಠಾನಗೊಳಿಸುವಂತೆ ಮೇಲೆ ಓದಲಾದ (2)ರಲ್ಲಿನ ಆಯವ್ಯಯ ಸಲಹಾ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.

ಮೇಲೆ ಓದಲಾದ (3)ರ ಆದೇಶದಲ್ಲಿ 2022-23 ನೇ ಸಾಲಿನಿಂದ ಜಾರಿಗೆ ಬರುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವಸತಿ ಶಾಲೆ/ಕಾಲೇಜು ಹಾಗೂ ಮೆಟ್ರಿಕ್ ಪೂರ್ವ /ನಂತರದ ವಿದ್ಯಾರ್ಥಿನಿಲಯಗಳ ಪ್ರತಿ ವಿದ್ಯಾರ್ಥಿಗೆ ಮಾಸಿಕ ಭೋಜನಾ ವೆಚ್ಚದಲ್ಲಿ ರೂ.150/-ಗಳನ್ನು ಹೆಚ್ಚಿಸಲಾಗಿರುತ್ತದೆ. ಸದರಿ ಆದೇಶದನ್ವಯ ಪ್ರಸ್ತುತ ಜಾರಿಯಲ್ಲಿರುವ ಬೋಜನಾ ವೆಚ್ಚದ ದರಗಳ ವಿವರ ಕೆಳಗಿನಂತಿರುತ್ತದೆ.

..2.

Scanned with OKEN Scanner

| ಕ್ರ.ಸಂ | ವಸತಿ ನಿಲಯದ ಹೆಸರು /ಲೆಕ್ಕಶೀರ್ಷಿಕೆ | ಪ್ರಸ್ತುತ ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ಭೋಜನ ವೆಚ್ಚ (ರೂ.ಗಳಲ್ಲಿ) |
|---|---|---|
| 1. | ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು 2225-00-103-0-34 | 1650/- |
| 2. | ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು 2225-00-103-0-34 | 1750/- |
| 3. | ಅಲ್ಪಸಂಖ್ಯಾತರ ವಸತಿ ಶಾಲೆ-ಕಾಲೇಜುಗಳು 2225-04-277-0-10 | 1750/- |

ಮೇಲೆ ಓದಲಾದ (4)ರಲ್ಲಿನ ಏಕ ಕಡತದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು 2024-25ನೇ ಸಾಲಿನಲ್ಲಿ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ 166ರಲ್ಲಿ ಘೋಷಿಸಿರುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿನ ವಿವಿಧ ವಿದ್ಯಾರ್ಥಿನಿಲಯ/ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಆಹಾರವನ್ನು ಒದಗಿಸಲು ಮಾಸಿಕ ಭೋಜನ ವೆಚ್ಚವನ್ನು ರೂ.100/-ರಷ್ಟು ಹೆಚ್ಚಿಸಲು ಸೂಕ್ತ ಸರ್ಕಾರಿ ಆದೇಶ ಹೊರಡಿಸುವಂತೆ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 203 ಎಂಡಿಎಸ್ 2024, ದಿ:07.06.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-166 ರಲ್ಲಿ ಘೋಷಿಸಿರುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಸತಿ ನಿಲಯಗಳು ಮತ್ತು ವಸತಿ ಶಾಲೆಗಳ ವಿದ್ಯಾರ್ಥಿಗಳ ಭೋಜನ ವೆಚ್ಚವನ್ನು 2024-25ನೇ ಸಾಲಿನಿಂದ ಜಾರಿಗೆ ಬರುವಂತೆ ಈ ಕೆಳಕಂಡಂತೆ ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.100/-ಗಳಷ್ಟು ಹೆಚ್ಚಿಸಿ ಆದೇಶಿಸಿದೆ.

| ಕ್ರ.ಸಂ | ವಸತಿ ನಿಲಯದ ಹೆಸರು/ಲೆಕ್ಕಶೀರ್ಷಿಕೆ | ಹಾಲಿ ಮಾಹೆಯಾನ ಜಾರಿಯಲ್ಲಿರುವ ದರಗಳು (ಪ್ರತಿ ವಿದ್ಯಾರ್ಥಿಗೆ) (ರೂ.ಗಳಲ್ಲಿ) | 2024-25ನೇ ಸಾಲಿನಲ್ಲಿ ಮಾಹೆಯಾನ ಹೆಚ್ಚಿಸಲಾಗಿರುವ ದರಗಳು (ರೂ.ಗಳಲ್ಲಿ) |
|---|---|---|---|
| 1. | ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು 2225-00-103-0-34 | 1650/- | 1750/- |
| 2. | ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು 2225-00-103-0-34 | 1750/- | 1850/- |
| 3. | ಅಲ್ಪಸಂಖ್ಯಾತರ ವಸತಿ ಶಾಲೆ-ಕಾಲೇಜುಗಳು 2225-04-277-0-10 | 1750/- | 1850/- |

...3.

Scanned with OKEN Scanner

ಈ ಯೋಜನೆಗಾಗಿ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ:2225-04-277-0-10 ಅಲ್ಪಸಂಖ್ಯಾತರ ವಸತಿ ಶಾಲೆಗಳು ಮತ್ತು ಲೆಕ್ಕಶೀರ್ಷಿಕೆ:2225-00-103-0-34(090) ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳು (ಜಿಲ್ಲಾವಲಯ) ಲೆಕ್ಕಶೀರ್ಷಿಕೆಯಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ವಿದ್ಯಾರ್ಥಿಗಳ ಮಂಜೂರಾತಿ ಸಂಖ್ಯೆಗೆ ಅನುಗುಣವಾಗಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

27/6/2024.
(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು.
3. ಎಲ್ಲಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.
4. ಸರ್ಕಾರದ ಅಧೀನ ಕಾರ್ಯದರ್ಶಿ,ಆರ್ಥಿಕ ಇಲಾಖೆ(ವೆಚ್ಚ3&9) ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ,ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned with OKEN Scanner